# ಕರ್ನಾಟಕ ವಿಧಾನ ಪರಿಷತ್ತು

ಗಣಕೀಯಂತ್ರಾಲಯ
06/3/2020
STD

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : 398 |
| ಸದಸ್ಯರ ಹೆಸರು | : ಶ್ರೀ ಮರಿತಿಬ್ಬೇಗೌಡ |
| ಉತ್ತರಿಸುವ ಸಚಿವರು | : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು |
| ಉತ್ತರಿಸುವ ದಿನಾಂಕ | : 06-03-2020 |

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ | ಕರ್ನಾಟಕ ರಾಜ್ಯ ರಸ್ತೆ ಸಾರಿಗೆ, ನಗರ ಸಾರಿಗೆ ಹಾಗೂ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಬಸ್‌ಗಳಲ್ಲಿ ವಿದ್ಯಾರ್ಥಿಗಳಿಗೆ ರಿಯಾಯಿತಿ ಬಸ್‌ಪಾಸ್ ಸೌಲಭ್ಯಗಳನ್ನು ಕಲ್ಪಿಸಲಾಗಿದೆಯೇ: | ಸಾರಿಗೆ ಸಂಸ್ಥೆಗಳ ಬಸ್‌ಗಳಲ್ಲಿ ವಿದ್ಯಾರ್ಥಿಗಳಿಗೆ ರಿಯಾಯಿತಿ / ಉಚಿತ ಬಸ್ ಪಾಸ್ ಸೌಲಭ್ಯವನ್ನು ಕಲ್ಪಿಸಲಾಗಿದೆ. |
| ಆ | ರಿಯಾಯಿತಿ ಬಸ್‌ಪಾಸ್ ಸೌಲಭ್ಯವನ್ನು ನೀಡುವಲ್ಲಿ ಅನುಸರಿಸಲಾಗುತ್ತಿರುವ ಮಾನದಂಡಗಳೇನು; (ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ, ನಗರ ಸಾರಿಗೆ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆವಾರು ಪ್ರತ್ಯೇಕವಾಗಿ ವಿವರ ನೀಡುವುದು) | ಸಾರಿಗೆ ಸಂಸ್ಥೆಗಳು ವಿದ್ಯಾರ್ಥಿ ಬಸ್ ಪಾಸ್ ವಿತರಣೆಯಲ್ಲಿ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸುತ್ತಿವೆ.<br>1. ವಿದ್ಯಾರ್ಥಿಯು ಕರ್ನಾಟಕ ಸರ್ಕಾರ / ಭಾರತ ಸರ್ಕಾರದಿಂದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳು/ ವಿಶ್ವವಿದ್ಯಾನಿಲಯಗಳ ಪೂರ್ಣಾವಧಿ ಕೋರ್ಸುಗಳಲ್ಲಿ ಅಭ್ಯಸಿಸುತ್ತಿರಬೇಕು.<br>2. ವಿದ್ಯಾರ್ಥಿಗಳು ವಾಸಸ್ಥಳದಿಂದ ವಿದ್ಯಾಸಂಸ್ಥೆವರೆಗೆ ಪ್ರಯಾಣಿಸಲು, ಗರಿಷ್ಠ ಪ್ರಯಾಣ ಮಿತಿ 60 ಕಿ.ಮೀವರೆಗೆ ವಿದ್ಯಾರ್ಥಿ ಬಸ್ ಪಾಸ್ ವಿತರಿಸಲಾಗುತ್ತಿದೆ.<br>3. ಭರ್ತಿಗೊಳಿಸಿದ ಅರ್ಜಿಯನ್ನು ಶಾಲೆ / ಕಾಲೇಜಿನ ಮುಖ್ಯಸ್ಥರಿಂದ ದೃಢೀಕರಿಸಿರಬೇಕು.<br>4. ಪ್ರಸಕ್ತ ಸಾಲಿನಲ್ಲಿ ವಿದ್ಯಾಸಂಸ್ಥೆಗೆ ಶುಲ್ಕ ಪಾವತಿಸಿರುವ ರಸೀದಿಯನ್ನು ಹಾಜರುಪಡಿಸಬೇಕು. ಶಾಲಾ/ಕಾಲೇಜಿನ ಗುರುತಿನ ಚೀಟಿಯನ್ನು ಪಾಸು ಪಡೆಯುವ ವೇಳೆ ಹಾಜರುಪಡಿಸುವುದು.<br>5. ಉಚಿತ ಬಸ್ ಪಾಸ್‌ದಾರರು ನಿಗದಿತ ಸಂಸ್ಕರಣಾ ಶುಲ್ಕ ಮತ್ತು ಅಪಘಾತ ಪರಿಹಾರ ನಿಧಿ ಶುಲ್ಕವನ್ನು (ಪ್ರಸ್ತುತ ರೂ.150/-) ಪಾವತಿಸುವುದು.<br>6. ರಿಯಾಯಿತಿ ಬಸ್‌ಪಾಸ್‌ದಾರರು ನಿಗದಿತ ಪಾಸಿನ ಶುಲ್ಕ, ಸಂಸ್ಕರಣಾ ಶುಲ್ಕ ಹಾಗೂ ಅಪಘಾತ ಪರಿಹಾರ ನಿಧಿ ಶುಲ್ಕವನ್ನು ಪಾವತಿಸುವುದು.<br>7. 2017-18 ನೇ ಸಾಲಿನಿಂದ ಸರ್ಕಾರದ ಆದೇಶದನ್ವಯ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ವಿತರಣೆ ಮಾಡುತ್ತಿರುವುದರಿಂದ, ಸದರಿ ವರ್ಗದ ವಿದ್ಯಾರ್ಥಿಗಳು ಕಡ್ಡಾಯವಾಗಿ ಜಾತಿ ಪ್ರಮಾಣ ಪತ್ರದ ಪ್ರತಿಯನ್ನು ಲಗತ್ತಿಸಬೇಕು. ದಾಖಲಾತಿ ಪರಿಶೀಲನೆಗೆ ಮೂಲ ಜಾತಿ ಪ್ರಮಾಣ ಪತ್ರವನ್ನು ಹಾಜರುಪಡಿಸಬೇಕು.<br>8. ನಿಗಮದ ಬಸ್ಸುಗಳ ಆಚರಣೆ ಇರುವ ಮಾರ್ಗಗಳಿಗೆ ಮಾತ್ರ ಬಸ್ ಪಾಸ್‌ಗಳನ್ನು ವಿತರಿಸಲಾಗುವುದು.<br>ಇವುಗಳೊಂದಿಗೆ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವ ವಿಧಾನದಲ್ಲಿ ಈ ಕೆಳಕಂಡಂತೆ ಮಾನದಂಡಗಳನ್ನು ಅನುಸರಿಸುತ್ತಿದೆ.<br>1. ವಿದ್ಯಾರ್ಥಿಗಳು ಪಾಸಿಗಾಗಿ ಸಂಸ್ಥೆಯ ವೆಬ್‌ಸೈಟ್ www.mybmtc.com ನಲ್ಲಿ ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡಿ ಪ್ರಸ್ತುತ ಸಾಲಿನ ಶಾಲಾ/ಕಾಲೇಜಿನ ಶುಲ್ಕ ರಸೀದಿ ಮತ್ತು ಭಾವಚಿತ್ರವನ್ನು ಅಪ್‌ಲೋಡ್ ಮಾಡಿ ಸಲ್ಲಿಸುವುದು.<br>2. ವಿದ್ಯಾರ್ಥಿಗಳು ಸಲ್ಲಿಸಿದ ಅರ್ಜಿಗಳನ್ನು (ರಾಜ್ಯ ಪಠ್ಯಕ್ರಮ ಅಭ್ಯಸಿಸುವ ವಿದ್ಯಾರ್ಥಿಗಳನ್ನು ಹೊರತುಪಡಿಸಿ) ಶಾಲಾ/ಕಾಲೇಜು ನೋಡಲ್ ಅಧಿಕಾರಿಗಳು ಪರಿಶೀಲಿಸಿ ಆನ್‌ಲೈನ್ ಮೂಲಕವೇ ಅನುಮೋದನೆಯನ್ನು ನೀಡುವುದು. |

<table>
<tr>
<td></td>
<td></td>
<td>3. ರಾಜ್ಯ ಪಠ್ಯಕ್ರಮ ಅಭ್ಯಸಿಸುವ ವಿದ್ಯಾರ್ಥಿಗಳಿಗಾಗಿ ನಿಗಧಿತ ಅರ್ಜಿಯನ್ನು ನೀಡಿದ್ದು, ಸದರಿ ಅರ್ಜಿಗಳನ್ನು ವಿದ್ಯಾರ್ಥಿಗಳು ಭರ್ತಿ ಮಾಡಿ, ಶಾಲೆಯ ಮುಖ್ಯಸ್ಥರಿಂದ ದೃಢೀಕರಿಸಿ, ನಂತರ ಸ್ಕ್ಯಾನ್ ಮಾಡಿ ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡುವುದು. ಸದರಿ ವಿದ್ಯಾರ್ಥಿಗಳ ಅರ್ಜಿಯನ್ನು ಬೆಂ.ಮ.ಸಾ.ಸಂಸ್ಥೆಯಿಂದ ಪರಿಶೀಲಿಸಿ ಅನುಮೋದಿಸಲಾಗುತ್ತಿದೆ.<br>4. ಈ ರೀತಿ ಅನುಮೋದನೆ ದೊರೆತ ನಂತರ ವಿದ್ಯಾರ್ಥಿಗಳು ಪಾಸ್ ಪಡೆಯುವ ಬಸ್ ನಿಲ್ದಾಣ, ದಿನಾಂಕ, ಸಮಯವನ್ನು ನಿಗಧಿಪಡಿಸಿಕೊಂಡು, ಅದರಂತೆ ಬಸ್ ನಿಲ್ದಾಣಕ್ಕೆ ಬಂದು ಪಾಸಿನ ಮೊತ್ತ ಮತ್ತು ಸೇವಾ ಶುಲ್ಕವನ್ನು ಪಾವತಿಸಿ ವಿದ್ಯಾರ್ಥಿ ಪಾಸನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ.<br>5. ಸಂಸ್ಥೆಯು ಕಾರ್ಯಾಚರಣೆ ಮಾಡುವ ಮಾರ್ಗಗಳಿಗೆ ಮಾತ್ರ ಬಸ್ ಪಾಸುಗಳನ್ನು ವಿತರಿಸಲಾಗುವುದು.</td>
</tr>
<tr>
<td>ಇ</td>
<td>ಕಳೆದ ಮೂರು ವರ್ಷಗಳಲ್ಲಿ ಈ ಸೌಲಭ್ಯ ಪಡೆದಿರುವ ವಿದ್ಯಾರ್ಥಿಗಳ ಒಟ್ಟು ಸಂಖ್ಯೆ ಎಷ್ಟು; (ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ, ನಗರ ಸಾರಿಗೆ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆವಾರು ಪ್ರತ್ಯೇಕವಾಗಿ ವಿವರ ನೀಡುವುದು)</td>
<td>ಕಳೆದ ಮೂರು ವರ್ಷಗಳಲ್ಲಿ ಈ ಸೌಲಭ್ಯ ಪಡೆದಿರುವ ವಿದ್ಯಾರ್ಥಿಗಳ ಒಟ್ಟು ಸಂಖ್ಯೆ ಈ ಕೆಳಕಂಡಂತಿವೆ.
<table>
<tr><th>ವರ್ಷ</th><th>ಕರಾರಸಾನಿ</th><th>ಬೆಂಮಸಾಸಂ</th><th>ವಾಕರಸಾಸಂ</th><th>ಈಕರಸಾಸಂ</th></tr>
<tr><td>2017-18</td><td>625000</td><td>373101</td><td>4,92,027</td><td>349550</td></tr>
<tr><td>2018-19</td><td>625064</td><td>335770</td><td>4,94,570</td><td>365105</td></tr>
<tr><td>2019-20 (ಜನವರಿ 2020 ರವರೆಗೆ)</td><td>606464</td><td>344718</td><td>4,80,885</td><td>373807</td></tr>
</table>
</td>
</tr>
<tr>
<td>ಈ</td>
<td>ಕಳೆದ 03 ವರ್ಷಗಳಿಂದ ರಿಯಾಯಿತಿ ಬಸ್‌ಪಾಸುಗಳ ವಿತರಣೆಯಿಂದ ಇಲಾಖೆಗೆ ಸಂದಾಯವಾದ ಮೊತ್ತವೆಷ್ಟು; (ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ, ನಗರ ಸಾರಿಗೆ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆವಾರು ಪ್ರತ್ಯೇಕವಾಗಿ ವಿವರ ನೀಡುವುದು)</td>
<td>ಸಾರಿಗೆ ಸಂಸ್ಥೆಗಳಿಗೆ ವಿದ್ಯಾರ್ಥಿ ರಿಯಾಯಿತಿ ಬಸ್ ಪಾಸ್ ವಿತರಣೆಯಿಂದ ಕಳೆದ 03 ವರ್ಷಗಳಲ್ಲಿ ವಿದ್ಯಾರ್ಥಿಗಳಿಂದ ಸಂದಾಯವಾಗಿರುವ ಮೊತ್ತದ ವಿವರಗಳು ಈ ಕೆಳಕಂಡಂತಿದೆ.<br>(ರೂ.ಕೋಟಿಗಳಲ್ಲಿ)
<table>
<tr><th>ವರ್ಷ</th><th>ಕರಾರಸಾನಿ</th><th>ಬೆಂಮಸಾಸಂ</th><th>ವಾಕರಸಾಸಂ</th><th>ಈಕರಸಾಸಂ</th></tr>
<tr><td>2017-18</td><td>34.17</td><td>31.00</td><td>28.13</td><td>15.77</td></tr>
<tr><td>2018-19</td><td>34.29</td><td>26.30</td><td>28.55</td><td>16.05</td></tr>
<tr><td>2019-20 (ಜನವರಿ2020 ರವರಗೆ)</td><td>33.22</td><td>27.81</td><td>27.06</td><td>16.70</td></tr>
</table>
</td>
</tr>
<tr>
<td>ಉ</td>
<td>ವಿದ್ಯಾರ್ಥಿಗಳಿಗೆ ಉಚಿತ ಬಸ್‌ಪಾಸ್ ಸೌಲಭ್ಯವನ್ನು ಕಲ್ಪಿಸಲು ಸರ್ಕಾರ ಚಿಂತಿಸಿದೆಯೇ:</td>
<td rowspan="2">ಸಾರಿಗೆ ಸಂಸ್ಥೆಗಳು ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಮತ್ತು ಎಲ್ಲಾ ತರಗತಿಯ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸುಗಳನ್ನು ವಿತರಿಸುತ್ತಿದೆ.</td>
</tr>
<tr>
<td>ಊ</td>
<td>ಯಾವ ಕಾಲಮಿತಿಯಲ್ಲಿ ಉಚಿತ ಬಸ್‌ಪಾಸ್ ಸೌಲಭ್ಯವನ್ನು ಕಲ್ಪಿಸಲಾಗುವುದು?</td>
</tr>
</table>

ಸಂಖ್ಯೆ: ಟಿಡಿ 37 ಟಿಸಿಕ್ಯೂ 2020

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು